# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಯೋಜನೆಯಡಿ 2018-19ನೇ ಸಾಲಿನಲ್ಲಿ ತುರ್ತು ನೀರಿನ ಸಮಸ್ಯೆಗಳನ್ನು ನಿರ್ವಹಿಸಲು ರಾಜ್ಯ ವಲಯದಡಿ ಜಿಲ್ಲೆಗಳಿಗೆ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ: ಸರ್ಕಾರದ ಆದೇಶ ಸಂಖ್ಯೆ: ನಂ.ಗ್ರಾಅಪ/48/ಗ್ರಾಕುನೀ&ನೈಇ/ಲೆಶಾ/2018-19, ಬೆಂಗಳೂರು, ದಿನಾಂಕ 05-04-2018
ಕಛೇರಿ ಪತ್ರ ಸಂ: ಗ್ರಾಅಪ/8/ಗ್ರಾನೀಸ(4) 2018/250-1 ದಿ:09.05.2018

**ಪೀಠಿಕೆ:**

ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸಿರುವಂತಹ ಸಮಸ್ಯಾತ್ಮಕ ಗ್ರಾಮಗಳಲ್ಲಿ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸುವ ಸಲುವಾಗಿ ಕುಡಿಯುವ ನೀರಿನ ಕಾಮಗಾರಿಗಳನ್ನು ಆದ್ಯತೆ ಮೇಲೆ ಸಾರ್ವಜನಿಕ ಹಿತದೃಷ್ಠಿಯಿಂದ ಅನುಷ್ಠಾನಗೊಳಿಸಲು ಅನುದಾನ ಬಿಡುಗಡೆ ಮಾಡಬೇಕಾಗಿದೆ.

ಉಲ್ಲೇಖ (1)ರ ಸರ್ಕಾರದ ಆದೇಶದನ್ವಯ ರಾಜ್ಯದ ಪಾಲಿನ ಅನುದಾನ ರೂ.157214.00 ಲಕ್ಷಗಳಲ್ಲಿ ಮೊದಲನೇ ಕಂತಿನ ಅನುದಾನ ರೂ.39303.00 ಲಕ್ಷಗಳನ್ನು ಈಗಾಗಲೇ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗೆ ಬಿಡುಗಡೆಗೊಳಿಸಲಾಗಿದೆ.

ಉಲ್ಲೇಖ (2)ರ ಪತ್ರದಲ್ಲಿ ತಿಳಿಸಿರುವಂತೆ ಆರ್ಥಿಕ ಇಲಾಖೆಯು ಅನುಮೋದಿಸಿರುತ್ತದೆ. ಪ್ರಸ್ತುತ ಸಮಸ್ಯಾತ್ಮಕ ಗ್ರಾಮಗಳಲ್ಲಿ ತುರ್ತಾಗಿ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲು ಅಗತ್ಯವಿರುವ ಕುಡಿಯುವ ನೀರಿನ ಪೂರ್ಣಗೊಂಡಿರುವ ಕಾಮಗಾರಿಗ ಸಲುವಾಗಿ ಸದರಿ ಮೊದಲನೇ ಕಂತಿನ ಅನುದಾನ ರೂ.39303.00 ಲಕ್ಷಗಳಲ್ಲಿ ಒಟ್ಟು ರೂ.8789.56 ಲಕ್ಷಗಳನ್ನು ರಾಜ್ಯದ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳಿಗೆ ಬಿಡುಗಡೆ ಮಾಡಲು ತೀರ್ಮಾನಿಸಲಾಗಿರುತ್ತದೆ. ಆದ್ದರಿಂದ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ನಂ.ಗ್ರಾಅಪ/48/ಗ್ರಾಕುನೀ&ನೈಇ/ಲೆಶಾ/2018-19, ಬೆಂಗಳೂರು, ದಿನಾಂಕ 18-05-2018**

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ ರಾಜ್ಯ ವಲಯದ ಗ್ರಾಮೀಣ ಕುಡಿಯುವ ನೀರು ಲೆಕ್ಕ ಶೀರ್ಷಿಕೆ 2215-01-102-9-08-132 ಸಾಮಾನ್ಯ ಅಡಿ ಚಿತ್ರದುರ್ಗ, ಚಿಕ್ಕಮಗಳೂರು, ಚಾಮರಾಜನಗರ, ತುಮಕೂರು, ಬಾಗಲಕೋಟೆ, ಮೈಸೂರು, ಹಾಸನ, ಬಳ್ಳಾರಿ, ಹಾವೇರಿ, ಕೊಪ್ಪಳ, ಮಂಡ್ಯ, ಕೋಲಾರ, ಚಿಕ್ಕಬಳ್ಳಾಪುರ ಹಾಗೂ ಬೆಂಗಳೂರು (ಗ್ರಾ) ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳಿಗೆ **ಅನುಬಂಧದಲ್ಲಿರುವಂತೆ** ರಾಜ್ಯ ವಲಯದ C&Q ಘಟಕದಡಿ ಅಡಿ ಒಟ್ಟು ರೂ.8789.56 ಲಕ್ಷಗಳು (ರೂಪಾಯಿ ಎಂಬತ್ತೇಳು ಕೋಟಿ ಎಂಬತ್ತೊಂತ್ತು ಲಕ್ಷಗಳ ಐವತ್ತಾರು ಸಾವಿರಗಳು ಮಾತ್ರ) ಅನುದಾನವನ್ನು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ವತಿಯಿಂದ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

2. ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನವು ಕೆಳಕಂಡ ನಿಬಂಧನೆಗೊಳಪಟ್ಟಿರುತ್ತದೆ:

I. ಮೇಲೆ ಓದಲಾದ ಸರ್ಕಾರದ ಸುತ್ತೋಲೆಯಲ್ಲಿನ ಮಾರ್ಗಸೂಚಿಗಳನ್ವಯ ಅನುಮೋದಿಸಲ್ಪಟ್ಟ ಕಾಮಗಾರಿಗಳನ್ನು ಮಾತ್ರ ಅನುಷ್ಠಾನಗೊಳಿಸಬೇಕು.

II. ಉಲ್ಲೇಖ (2)ರ ಪತ್ರದಲ್ಲಿ ತಿಳಿಸಿರುವಂತೆ ಪೂರ್ಣವಾಗಿರುವ ಕಾಮಗಾರಿಗಳಿಗೆ ಮಾತ್ರ ಉಪಯೋಗಿಸುವುದು.

III. ತೀವ್ರ ಅನಿವಾರ್ಯವಿದ್ದಲ್ಲಿ ಮಾತ್ರ ಭೂ ವಿಜ್ಞಾನಿಗಳ ಸಲಹೆ ಮೇರೆಗೆ **ಹೊಸ ಬೋರ್‌ವೆಲ್‌ಗಳನ್ನು ಕೊರೆಸಿ,** ಸದರಿ ಬೋರ್‌ವೆಲ್‌ಗಳು ಸಾರ್ವಜನಿಕ ಉಪಯೋಗಕ್ಕೆ ಲಭ್ಯವಾಗುವಂತೆ ನೋಡಿಕೊಳ್ಳತಕ್ಕದ್ದು.

IV. ಹೊಸ ಕೊಳವೆ ಬಾವಿಗಳನ್ನು ಕೊರೆಯುವ ಮುನ್ನ ಅದರ ಸ್ಥಳ ಮತ್ತು ಗುರುತಿಗಾಗಿ **GPS System** ಮುಖೇನ ಅಧಿಕೃತ ದಾಖಲೆ ಮಾಡುವುದರ ಜೊತೆಗೆ, ಅದರ ಛಾಯಾ ಚಿತ್ರವನ್ನು ಕಾಮಗಾರಿಗೆ ಮುನ್ನ ಹಾಗೂ ನಂತರ ತೆಗೆದು ಗಾಂಧಿ ಸಾಕ್ಷಿಕಾಯಕದಲ್ಲಿ ದಾಖಲಿಸತಕ್ಕದ್ದು. ಸಂಬಂಧಪಟ್ಟ ಸ್ಥಳೀಯ ಹಿರಿಯ ಅಧಿಕಾರಿ ಈ ಪ್ರಕ್ರಿಯೆಯನ್ನು ಧೃಢೀಕರಿಸತಕ್ಕದ್ದು.

V. ಜಿಲ್ಲಾಧಿಕಾರಿಗಳು ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜೊತೆಗೂಡಿ ಧೃಢೀಕರಿಸಿರುವ ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಧೃಢೀಕರಿಸಿ ಟಾಸ್ಕ್‌ಫೋರ್ಸ್ ಸಮಿತಿಯಲ್ಲಿ ಅನುಮೋದನೆಯಾದ ಕ್ರಿಯಾ ಯೋಜನೆಯ ಕಾಮಗಾರಿಗಳಿಗೆ ವಿನಿಯೋಗಿಸತಕ್ಕದ್ದು.

VI. ಆಯಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಅನುಮೋದಿಸತಕ್ಕದ್ದು. ಈಗ ಒದಗಿಸಿರುವ ಅನುದಾನದ ಮಿತಿಯೊಳಗೆ ಕಾಮಗಾರಿಗಳನ್ನು ಸ್ಥಳೀಯ ಅಗತ್ಯತೆ ಆಧರಿಸಿ ಜಿಲ್ಲಾ ಪಂಚಾಯತ್‌ನ ಮುಖ್ಯ

ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಮುಖೇನ ಅನುಷ್ಠಾನಗೊಳಿಸಬೇಕು.

3. ಈ ಆದೇಶದಲ್ಲಿ ರಾಜ್ಯ ವಲಯಗಳಡಿ ಬಿಡುಗಡೆ ಮಾಡಿರುವ ಅನುದಾನವನ್ನು 2018-19ನೇ ಸಾಲಿನ ಲೆಕ್ಕ ಶೀರ್ಷಿಕೆ 2215-01-102-9-08 ಅಡಿ ಆಯುಕ್ತರು, RDW&SD ರವರ ಮೇಲು ರುಜುವಿನೊಂದಿಗೆ Payees Receipt ಮೇಲೆ ಖಜಾನೆಯಿಂದ ತೆಗೆದು ಕೇಂದ್ರ ಸರ್ಕಾರಕ್ಕೆ ಅಧಿಕೃತವಾಗಿ ಘೋಷಿಸಿರುವ ಸಿಂಡಿಕೇಟ್ ಬ್ಯಾಂಕ್ ಉಳಿತಾಯ ಖಾತೆ ಸಂಖ್ಯೆ: 04462010091577ಗೆ ರಾಜ್ಯದ ಪಾಲಾಗಿ ಜಮೆ ಮಾಡಲಾಗಿರುತ್ತದೆ.

4. ಈ ಆದೇಶದಲ್ಲಿ ಬಿಡುಗಡೆ ಮಾಡಲಾದ ಅನುದಾನವನ್ನು ಯಾವುದೇ ಕಾರಣದಲ್ಲೂ ಇತರೆ ಘಟಕದಡಿ ವರ್ಗಾಯಿಸಿ ಉಪಯೋಗಿಸಿಕೊಳ್ಳದಂತೆ ಕ್ರಮ ವಹಿಸತಕ್ಕದ್ದು.

5. ಬ್ಯಾಂಕ್‌ಗೆ ಕಳುಹಿಸುವ ಆರ್.ಟಿ.ಜಿ.ಎಸ್. ನಮೂನೆಯಲ್ಲಿ **ಸಂಬಂಧಿಸಿದ ಘಟಕಗಳ ಹೆಸರನ್ನು** ನಮೂದಿಸತಕ್ಕದ್ದು.

6. ಆಯಾಯ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳು ಪ್ರಸ್ತುತ ಬಿಡುಗಡೆ ಮಾಡುತ್ತಿರುವ ಅನುದಾನಕ್ಕೆದುರಾಗಿ ಸಂಬಂಧಪಟ್ಟ ಕಾಮಗಾರಿಗಳ ಅನುಷ್ಠಾನದ ಭೌತಿಕ ಹಾಗೂ ಆರ್ಥಿಕ ಪ್ರಗತಿಯನ್ನು IMIS ನಲ್ಲಿ ಪ್ರತಿ ಮಾಹೆ 10ನೇ ದಿನಾಂಕದೊಳಗೆ ಇಂದೀಕರಿಸತಕ್ಕದ್ದು. ಹಾಗೂ ಮುಖ್ಯ ಇಂಜಿನಿಯರ್, ಗ್ರಾ.ಕು.ನೀ.&.ನೈ. ಇಲಾಖೆ ಇವರು ಆಯಾಯ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳು IMIS ನಲ್ಲಿ ಇಂದೀಕರೀಸಿದ ಮಾಹಿತಿಯನ್ನು ಪರಿಶೀಲಿಸತಕ್ಕದ್ದು.

7. ಮುಖ್ಯ ಲೆಕ್ಕಾಧಿಕಾರಿಗಳು, ಗ್ರಾ.ಕು.ನೀ.&.ನೈ. ಇಲಾಖೆ ಪ್ರಸ್ತುತ ಬಿಡುಗಡೆ ಮಾಡುತ್ತಿರುವ ಅನುದಾನವನ್ನು IMIS ನಲ್ಲಿ ಇಂದೀಕರಿಸತಕ್ಕದ್ದು.

8. ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನವನ್ನು RTGS ಮುಖೇನ ಈಗಾಗಲೇ ಗೊತ್ತುಪಡಿಸಿರುವ SWSM ಬ್ಯಾಂಕ್ ಮೂಲ ಉಳಿತಾಯ ಖಾತೆ ಸಂಖ್ಯೆ: 04462010091577 ಮುಖಾಂತರ ವಿನಿಯೋಗಿಸತಕ್ಕದ್ದು.

9. ಈ ಆದೇಶದಲ್ಲಿ ಬಿಡುಗಡೆ ಮಾಡಲಾಗುತ್ತಿರುವ ಅನುದಾನವನ್ನು ಕರ್ನಾಟಕ ಪಾರದರ್ಶಕ ಕಾಯ್ದೆ-1999 ಮತ್ತು ಕರ್ನಾಟಕ ಪಾರದರ್ಶಕ ನಿಯಮಗಳು-2000, ಕರ್ನಾಟಕ ಆರ್ಥಿಕ ಸಂಹಿತೆ-1958 ಹಾಗೂ ಚಾಲ್ತಿ ಇರುವ ಇಲಾಖಾ ಇತರೆ ನಿಯಮಗಳು / ಕಾಯ್ದೆಗಳನ್ವಯ ಖರ್ಚು ಭರಿಸತಕ್ಕದ್ದು.

10. ಈ ಆದೇಶವನ್ನು ಆರ್ಥಿಕ ಇಲಾಖೆಯ ಸಹಮತಿ ಸಂ.ಆಇ/75/ವೆಚ್ಚ-6/2018(ಭಾ), ದಿನಾಂಕ 24-04-2018 ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

19/5

ಆಯುಕ್ತರು ಹಾಗೂ
ಸರ್ಕಾರದ ಪದನಿಮಿತ್ತ ಕಾರ್ಯದರ್ಶಿ,
ಗ್ರಾ. ಕು. ನೀ. &. ನೈ. ಇಲಾಖೆ, ಬೆಂಗಳೂರು.

**ಪ್ರತಿಯನ್ನು :**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು-1) ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಯೋಜನಾ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬೆಂಗಳೂರು.

9. ವಿಶೇಷಾಧಿಕಾರಿ (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
10. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
11. ಮುಖ್ಯ ಇಂಜಿನಿಯರ್, ಗ್ರಾ.ಕು.ನೀ.&.ನೈ. ಇಲಾಖೆ, 1ನೇ ಮಹಡಿ, ಕೆ.ಹೆಚ್.ಬಿ. ಕಟ್ಟಡ, ಕಾವೇರಿಭವನ, ಬೆಂಗಳೂರು.
12. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&.ನೈ. ವೃತ್ತ, 4 ವೃತ್ತ ಕಛೇರಿಗಳು
13. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ, ಖಜಾನೆ ಇಲಾಖೆ, ಬೆಂಗಳೂರು
14. ಮುಖ್ಯ ಲೆಕ್ಕಾಧಿಕಾರಿಗಳು, RDW&SD ಕೇಂದ್ರ ಕಛೇರಿ, ಬೆಂಗಳೂರು.
15. ಅಧ್ಯಕ್ಷರು, ಜಿಲ್ಲಾ ಪಂಚಾಯತ್, ಚಿತ್ರದುರ್ಗ, ಚಿಕ್ಕಮಗಳೂರು, ಚಾಮರಾಜನಗರ, ತುಮಕೂರು, ಬಾಗಲಕೋಟೆ, ಮೈಸೂರು, ಹಾಸನ, ಬಳ್ಳಾರಿ, ಹಾವೇರಿ, ಕೊಪ್ಪಳ, ಮಂಡ್ಯ, ಕೋಲಾರ, ಚಿಕ್ಕಬಳ್ಳಾಪುರ ಹಾಗೂ ಬೆಂಗಳೂರು (ಗ್ರಾ) ಜಿಲ್ಲೆಗಳು
16. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಚಿತ್ರದುರ್ಗ, ಚಿಕ್ಕಮಗಳೂರು, ಚಾಮರಾಜನಗರ, ತುಮಕೂರು, ಬಾಗಲಕೋಟೆ, ಮೈಸೂರು, ಹಾಸನ, ಬಳ್ಳಾರಿ, ಹಾವೇರಿ, ಕೊಪ್ಪಳ, ಮಂಡ್ಯ, ಕೋಲಾರ, ಚಿಕ್ಕಬಳ್ಳಾಪುರ ಹಾಗೂ ಬೆಂಗಳೂರು (ಗ್ರಾ) ಜಿಲ್ಲೆಗಳು
17. ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ರಾಜ್ಯದ ಚಿತ್ರದುರ್ಗ, ಚಿಕ್ಕಮಗಳೂರು, ಚಾಮರಾಜನಗರ, ತುಮಕೂರು, ಬಾಗಲಕೋಟೆ, ಮೈಸೂರು, ಹಾಸನ, ಬಳ್ಳಾರಿ, ಹಾವೇರಿ, ಕೊಪ್ಪಳ, ಮಂಡ್ಯ, ಕೋಲಾರ, ಚಿಕ್ಕಬಳ್ಳಾಪುರ ಹಾಗೂ ಬೆಂಗಳೂರು (ಗ್ರಾ) ಜಿಲ್ಲೆಗಳು
18. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&.ನೈ. ವಿಭಾಗ, ರಾಜ್ಯದ ಚಿತ್ರದುರ್ಗ, ಚಿಕ್ಕಮಗಳೂರು, ಚಾಮರಾಜನಗರ, ತುಮಕೂರು, ಬಾಗಲಕೋಟೆ, ಮೈಸೂರು, ಹಾಸನ, ಬಳ್ಳಾರಿ, ಹಾವೇರಿ, ಕೊಪ್ಪಳ, ಮಂಡ್ಯ, ಕೋಲಾರ, ಚಿಕ್ಕಬಳ್ಳಾಪುರ ಹಾಗೂ ಬೆಂಗಳೂರು (ಗ್ರಾ) ವಿಭಾಗ ಕಛೇರಿಗಳು.
19. ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿಗಳು.
20. ಆಯುಕ್ತರು, RDW&SD ಮತ್ತು ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ ಇವರ ಆಪ್ತ ಸಹಾಯಕರಿಗೆ.
21. ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್, BWSSB ಶಾಖೆ, ರಾಜಧೂತ್ ಕಾಂಪ್ಲೆಕ್ಸ್, ಅವೆನ್ಯೂ ರಸ್ತೆ, ಬೆಂಗಳೂರು.
22. ಆಂತರಿಕ ಆರ್ಥಿಕ ಸಲಹೆಗಾರರು, RDPR ಇಲಾಖೆ ಇವರ ಆಪ್ತ ಸಹಾಯಕರು.
23. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾ.ಅ.ಪಂ.ರಾಜ್ ಇಲಾಖೆ, ಬೆಂಗಳೂರು.
24. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
25. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
26. ಗ್ರಾಅಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು).
27. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ಅನುಬಂಧ

ಸರ್ಕಾರದ ಆದೇಶ ಸಂ.ಗ್ರಾಅಪ/48/ಗ್ರಾಕುನೀ&ನೈಇ/ಲೆಶಾ/2018-19, ಬೆಂಗಳೂರು, ದಿನಾಂಕ 18-05-2018 ರ ಲಗತ್ತು

ಗ್ರಾಮೀಣ ಜನವಸತಿಗಳಲ್ಲಿ ಅನುಮೋದನೆ ಪಡೆಯದೆ ತೆಗೆದುಕೊಂಡಿರುವ ಕಾಮಗಾರಿಗಳನ್ನು ಜಿಲ್ಲಾಧಿಕಾರಿಗಳು ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜೊತೆಗೂಡಿ ಧೃಢೀಕರಿಸಿರುವ ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜೊತೆಗೂಡಿ ಧೃಢೀಕರಿಸಿರುವ, ಟಾಸ್ಕ್ ಫೋರ್ಸ್ ಸಮಿತಿಯಲ್ಲಿ ಅನುಮೋದನೆಯಾದ ಕಾಮಗಾರಿಗಳಿಗೆ ಬಿಡುಗಡೆಮಾಡಲಾದ ಅನುದಾನ

(ರೂ. ಲಕ್ಷಗಳಲ್ಲಿ)

| ಕ್ರಮ ಸಂಖ್ಯೆ | ಜಿಲ್ಲೆಯ ಹೆಸರು | ಬಿಡುಗಡೆಮಾಡಲಾದ ಅನುದಾನ |
|---|---|---|
| **DC & CEO Approved** | | |
| 1 | ಚಿತ್ರದುರ್ಗ | 1825.74 |
| 2 | ಚಿಕ್ಕಮಗಳೂರು | 129.67 |
| 3 | ಚಾಮರಾಜನಗರ | 343.91 |
| 4 | ತುಮಕೂರು | 1485.65 |
| 5 | ಬಾಗಲಕೋಟೆ | 161.50 |
| 6 | ಮೈಸೂರು | 334.44 |
| 7 | ಹಾಸನ | 143.80 |
| **Sub Total** | | **4424.71** |
| **CEO Approved** | | |
| 8 | ಬಳ್ಳಾರಿ | 50.70 |
| 9 | ಹಾವೇರಿ | 366.63 |
| 10 | ಕೊಪ್ಪಳ | 1.75 |
| 11 | ಮಂಡ್ಯ | 453.00 |
| 12 | ಕೋಲಾರ | 1488.00 |
| 13 | ಚಿಕ್ಕಬಳ್ಳಾಪುರ | 1241.24 |
| 14 | ಬೆಂಗಳೂರು (ಗ್ರಾ) | 763.53 |
| **Sub Total** | | **4364.85** |
| **Grand Total** | | **8789.56** |

19/05

ಆಯುಕ್ತರು ಹಾಗೂ
ಸರ್ಕಾರದ ಪದನಿಮಿತ್ತ ಕಾರ್ಯದರ್ಶಿ,
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.